ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೨೦

# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೇಳನೇ ಅಧಿವೇಶನ

## (ಮುಂದುವರೆದ ಉಪವೇಶನ)

**ಸೋಮವಾರ, ದಿನಾಂಕ: ೩೦ನೇ ಮಾರ್ಚ್, ೨೦೧೫**

---

ಸಮೂಹ – I

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

---

## ಬಡತನ ರೇಖೆಗಿಂತ ಕೆಳಗಿರುವ ಜನರ ಸಕ್ಕರೆ ಖಾಯಿಲೆಗೆ ಉಚಿತ ಚಿಕಿತ್ಸೆ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೨೮೬ (೯೮೬೩) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿನ ಬಡತನ ರೇಖೆಗಿಂತ ಕೆಳಗಿರುವ ಜನರು ಸಕ್ಕರೆ ಖಾಯಿಲೆ (ಡಯಾಬಿಟೀಸ್)ಯಿಂದ ನರಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ೨೦೧೩ನೇ ಸಾಲಿನಿಂದೀಚೆಗೆ ಸಕ್ಕರೆ ಖಾಯಿಲೆಗೆ ತುತ್ತಾಗಿರುವವರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಖಾಯಿಲೆಗೆ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತ ಚಿಕಿತ್ಸೆ ಮತ್ತು ಔಷಧೋಪಚಾರಗಳ ವ್ಯವಸ್ಥೆ ಮಾಡಲಾಗಿದೆಯೇ; ಮಾಡಿದ್ದಲ್ಲಿ, ರಾಜ್ಯದಲ್ಲಿ ಒಟ್ಟು ಎಷ್ಟು ಆಸ್ಪತ್ರೆಗಳಲ್ಲಿ ವ್ಯವಸ್ಥಿತ ಚಿಕಿತ್ಸೆ ದೊರೆಯುತ್ತಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಕಳೆದ ಒಂದು ವರ್ಷದಿಂದೀಚೆಗೆ ಈ ಖಾಯಿಲೆಯಿಂದ ಬಳಲುತ್ತಿರುವವರ ಚಿಕಿತ್ಸೆಗಾಗಿ ಸರ್ಕಾರದಿಂದ ಮೀಸಲಿಟ್ಟಿರುವ ಅನುದಾನವೆಷ್ಟು; ಆ ವೈಕಿ ಚಿಕಿತ್ಸೆಗಾಗಿ ಖರ್ಚಾದ ಮೊತ್ತ ಎಷ್ಟು; ಸರ್ಕಾರದಿಂದ ವಿಮೆ ಅಥವಾ ಇತರೆ ವೈದ್ಯಕೀಯ ಭದ್ರತೆ ಒದಗಿಸುವ ಉದ್ದೇಶ ಸರ್ಕಾರಕ್ಕಿದೆಯೇ; ಇದ್ದಲ್ಲಿ, ಈ ನಿಟ್ಟಿನಲ್ಲಿ ಯಾವ ಕ್ರಮ ಜರುಗಿಸಲಾಗಿದೆ ?

## ಹಿಂದುಳಿದ ವರ್ಗಗಳಿಗೆ ಲಭ್ಯವಿರುವ ಸೌಲಭ್ಯಗಳು

ಶ್ರೀ ಬಿ.ಜಿ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –

೨೮೭ (೨೯೯೪) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಶಿಕ್ಷಣದ ಅಭಿವೃದ್ಧಿಗೆ ಸರ್ಕಾರದಿಂದ ಲಭ್ಯವಿರುವ ಸವಲತ್ತುಗಳು ಯಾವುವು; (ಪೂರ್ಣ ವಿವರ ನೀಡುವುದು)

(ಆ) ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ನೀಡುತ್ತಿರುವ ವಿದ್ಯಾರ್ಥಿ ವೇತನದ ಮೊತ್ತವೆಷ್ಟು;

(ಇ) ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯದಲ್ಲಿ ಪ್ರವೇಶ ಸಿಗದಿದ್ದರೆ, ಅಂತಹ ವಿದ್ಯಾರ್ಥಿಗಳಿಗೆ ಸರ್ಕಾರ ನೀಡುತ್ತಿರುವ ಸೌಲಭ್ಯಗಳೇನು;

(ಈ) ಸರ್ಕಾರ ಖಾಸಗಿ ವಿದ್ಯಾರ್ಥಿ ನಿಲಯಗಳಿಗೆ ನೀಡುತ್ತಿರುವ ಅನುದಾನದ ವಿವರಗಳೇನು;

(ಉ) ವಿವಿಧ ಸಂಸ್ಥೆಗಳಿಂದ ಖಾಸಗಿಯಾಗಿ ನಡೆಸುತ್ತಿರುವ ವಿದ್ಯಾರ್ಥಿನಿಲಯಗಳಲ್ಲಿ ಅವಶ್ಯಕವಿರುವ ಎಲ್ಲಾ ಸೌಲಭ್ಯಗಳು ಇದ್ದರೆ, ಅಂತಹ ಸಂಸ್ಥೆಗಳ ವಿದ್ಯಾರ್ಥಿ ನಿಲಯಕ್ಕೆ ಪ್ರಾರಂಭದಿಂದಲೇ ಅನುದಾನ ನೀಡಲು ಇರುವ ತೊಂದರೆಗಳೇನು ?

## ಸಮಾಜ ಕಲ್ಯಾಣ ಇಲಾಖೆಯಲ್ಲಿ ಅನುಷ್ಠಾನಗೊಳಿಸಿದ ಯೋಜನೆಗಳು

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೨೮೮ (೩೦೧೧) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೨೦೧೫ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಬೀದರ್ ಜಿಲ್ಲೆಯಲ್ಲಿ ಅನುಷ್ಠಾನಗೊಳಿಸಿದ ವಿವಿಧ ಯೋಜನೆಗಳು ಯಾವುವು; (ತಾಲ್ಲೂಕುವಾರು, ಯೋಜನಾವಾರು ವಿವರ ನೀಡುವುದು)

(ಆ) ಪ್ರತಿ ಯೋಜನೆಗೆ ಬಿಡುಗಡೆ ಮಾಡಿದ ಅನುದಾನವೆಷ್ಟು ಹಾಗೂ ಖರ್ಚು ಮಾಡಿದ ಅನುದಾನವೆಷ್ಟು; (ಯೋಜನಾವಾರು, ತಾಲ್ಲೂಕುವಾರು ಅಂಕಿ ಅಂಶಗಳ ಸಹಿತ ಮಾಹಿತಿ ನೀಡುವುದು)

(ಇ) ಪ್ರಸಕ್ತ ಸಾಲಿನಲ್ಲಿ ವಿವಿಧ ಯೋಜನೆಗಳಿಗೆ ಸರ್ಕಾರ ಬಿಡುಗಡೆಗೊಳಿಸಿರುವ ಅನುದಾನವನ್ನು ಪೂರ್ಣವಾಗಿ ಬಳಸಿಕೊಳ್ಳಲಾಗಿದೆಯೇ;

(ಈ) ಬಾಕಿ ಇರುವ ಅನುದಾನವನ್ನು ಬಳಸಲು ಸರ್ಕಾರ ಕೈಗೊಂಡ ಕ್ರಮಗಳಾವುವು ? (ವಿವರವಾದ ಮಾಹಿತಿ ನೀಡುವುದು)

## ನಗರದಲ್ಲಿ ವಾಯುಮಾಲಿನ್ಯ ನಿಯಂತ್ರಿಸುವ ಸಲುವಾಗಿ ಆಟೋಗಳ ನಿಷೇಧ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೮೯ (೩೦೨೧) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರದಲ್ಲಿ ವಾಯುಮಾಲಿನ್ಯ ನಿಯಂತ್ರಿಸುವ ಸಲುವಾಗಿ ಆಟೋಗಳ ನಿಷೇಧಕ್ಕೆ ಸರ್ಕಾರ ಉದ್ದೇಶಿಸಿದೆಯೇ; ಇದು ಯಾವಾಗಿನಿಂದ ಅನುಷ್ಠಾನಗೊಳ್ಳಲಿದೆ; ಈ ನಿಟ್ಟಿನಲ್ಲಿ ವಾಹನಗಳ ನೋಂದಣಿ ಪ್ರಕ್ರಿಯೆಯನ್ನು ಈಗಾಗಲೇ ಸ್ಥಗಿತಗೊಳಿಸಲಾಗಿದೆಯೇ:

(ಆ) ಈ ರೀತಿಯ ಕಡಿವಾಣ ಕ್ರಮಕ್ಕೆ ಶಿಫಾರಸ್ಸು ಮಾಡಿದ್ದು ಯಾರು; ಈ ಶಿಫಾರಸ್ಸನ್ನು ಸರ್ಕಾರ ಒಪ್ಪಿದೆಯೇ; ಇಲ್ಲದಿದ್ದಲ್ಲಿ, ಕಾರಣಗಳೇನು; (ವಿವರ ನೀಡುವುದು)

(ಇ) ಅತಿ ಹೆಚ್ಚಿನ ಹೊಗೆ ಉಗುಳುವ ಹಳೆಯ ಆಟೋಗಳಿಗೆ ಎಫ್‌ಸಿಯನ್ನು ನೀಡದಿರುವಂತೆ ಮಾಡಲು ಇರುವ ತೊಂದರೆಗಳೇನು;

(ಈ) ವಾಯುಮಾಲಿನ್ಯ ಹಾಗೂ ಶಬ್ದಮಾಲಿನ್ಯವನ್ನು ತಡೆಗಟ್ಟಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಅಂತಹ ಆಟೋಗಳ ಮಾಲೀಕರಿಗೆ ದಂಡ ವಿಧಿಸುವುದರ ಜೊತೆಗೆ ವಾಹನದ ಪರವಾನಗಿ ರದ್ದುಪಡಿಸಲು ಸರ್ಕಾರ ಚಿಂತಿಸಿದೆಯೇ ? (ವಿವರ ನೀಡುವುದು)

## ಹಿಂದುಳಿದ ವರ್ಗಗಳ ಸಮುದಾಯ ಭವನ ನಿರ್ಮಾಣ

**ಶ್ರೀ ಎಸ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೨೯೦ (೨೯೯೨) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ರಾಯಚೂರು ಜಿಲ್ಲೆಯ ರಾಯಚೂರು ಮತ್ತು ಮಾನ್ವಿ ತಾಲ್ಲೂಕುಗಳಲ್ಲಿ ಇರುವ ಹಿಂದುಳಿದ ವರ್ಗಗಳ ಸಮುದಾಯ ಭವನಗಳು ಎಷ್ಟು;

(ಆ) ಬೇಡಿಕೆಯ ಮೇರೆಗೆ ೨೦೧೫–೧೬ನೇ ಸಾಲಿನಲ್ಲಿ ಹೊಸದಾಗಿ ಸಮುದಾಯ ಭವನವನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಎಲ್ಲೆಲ್ಲಿ ನಿರ್ಮಿಸಲಾಗುವುದು ? (ಪೂರ್ಣ ವಿವರ ಒದಗಿಸುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಗ್ರಾಹಕರ ವೇದಿಕೆಯಲ್ಲಿ ಇತ್ಯರ್ಥಪಡಿಸದ ದೂರುಗಳು

**ಶ್ರೀ ಐವನ್ ಡಿ'ಸೋಜಾ (ನಾಮ ನಿರ್ದೇಶನ ಹೊಂದಿದವರು) –**

೨೯೧ (೨೯೧೪) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಗ್ರಾಹಕರ ವೇದಿಕೆಯಲ್ಲಿ ಇತ್ಯರ್ಥಪಡಿಸಲು ಇರುವ ದೂರುಗಳ ಸಂಖ್ಯೆ ಎಷ್ಟು;

(ಆ) ೨೦೧೩–೧೪ರಲ್ಲಿ ಎಷ್ಟು ದೂರುಗಳನ್ನು ಇತ್ಯರ್ಥಪಡಿಸಲಾಗಿದೆ;

(ಇ) ಅದಾಲತ್ ಮುಖಾಂತರ ಇತ್ಯರ್ಥಪಡಿಸಿದ ದೂರುಗಳ ಸಂಖ್ಯೆ ಎಷ್ಟು;

(ಈ) ಖಾಯಂ ಅಧ್ಯಕ್ಷರ ನೇಮಕಾತಿ ಇಲ್ಲದೇ ದೂರುಗಳ ವಿಚಾರಣೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಪ್ರಸ್ತುತ ಅಧ್ಯಕ್ಷರು ಎಷ್ಟು ದಿನ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಕರಣಗಳ ಇತ್ಯರ್ಥಕ್ಕೆ

## ಹೈದ್ರಾಬಾದ್‌–ಕರ್ನಾಟಕ ಭಾಗದಲ್ಲಿ ವೈದ್ಯರ ಕೊರತೆಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೨೯೨ (೨೯೩೫) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಎಷ್ಟು ವೈದ್ಯರ ಕೊರತೆ ಇದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸಂವಿಧಾನದ ಕಲಂ ೩೭೧ (ಜೆ)ಗೆ ತಿದ್ದುಪಡಿಯ ನಂತರ ಈ ಜಿಲ್ಲೆಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳನ್ನು ತುಂಬಲು ಕೈಗೊಂಡಿರುವ ಕ್ರಮಗಳೇನು; ಎಷ್ಟು ಜನ ವೈದ್ಯರನ್ನು ನೇಮಕ ಮಾಡಿಕೊಳ್ಳಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಇ) ವೈದ್ಯರ ಕೊರತೆ ನೀಗಲು ಮೂರು ವರ್ಷಗಳ ವೈದ್ಯ ಪದವಿ ಕೋರ್ಸ್‌ಗಳನ್ನು ಆರಂಭಿಸಲು ಸರ್ಕಾರ ನಿರ್ಧರಿಸಿದೆಯೇ; ಇದರ ಸಾಧಕ–ಬಾಧಕಗಳ ಅಧ್ಯಯನ ಮಾಡಲಾಗಿದೆಯೇ ? (ವಿವರ ನೀಡುವುದು)

## ಕಿದ್ವಾಯಿ ಆಸ್ಪತ್ರೆಯ ಅಭಿವೃದ್ಧಿ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮ ನಿರ್ದೇಶನ ಹೊಂದಿದವರು) –**

೨೯೩ (೨೯೫೨) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ಕಿದ್ವಾಯಿ ಆಸ್ಪತ್ರೆಯಲ್ಲಿರುವ ಸೌಕರ್ಯಗಳೇನು; (ವಿವರ ನೀಡುವುದು)

(ಆ) ಇತ್ತೀಚಿನ ದಿನಗಳಲ್ಲಿ ರೋಗಿಗಳ ಸಂಖ್ಯೆ ಜಾಸ್ತಿಯಾಗುತ್ತಿದ್ದು, ಸ್ಥಳಾವಕಾಶ ಕಡಿಮೆಯಿಂದ ರೋಗಿಗಳಿಗೆ ಅನಾನುಕೂಲ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಬರುವ ಎಲ್ಲಾ ರೋಗಿಗಳಿಗೆ ಹೆಚ್ಚಿನ ಸೌಲಭ್ಯ ಕಲ್ಪಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

(ಈ) ಬಡ ರೋಗಿಗಳ ಚಿಕಿತ್ಸೆಗೆ ತೆಗೆದುಕೊಳ್ಳುತ್ತಿರುವ ಕ್ರಮಗಳೇನು ?

## ರಾಜ್ಯದಲ್ಲಿ ಹೊಸ ವೈದ್ಯಕೀಯ ಕಾಲೇಜುಗಳು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೨೯೪ (೩೦೧೯) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೊಸ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸುವ ಉದ್ದೇಶವಿದೆಯೇ;

(ಆ) ಇದ್ದರೆ, ಯಾವ ಯಾವ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜು ಪ್ರಾರಂಭಿಸಲಾಗುವುದು;

(ಇ) ಹಾವೇರಿ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜು ಪ್ರಾರಂಭಿಸುತ್ತೇವೆಂದು ಘೋಷಣೆ ಮಾಡಿರುವಂತೆ ಈ ಬಾರಿಯಾದರೂ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲಾಗುವುದೇ ?

## ನಂಜನಗೂಡು ಬಸ್ ನಿಲ್ದಾಣ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೯೫ (೩೦೨೨) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರಿನಿಂದ ಚಾಮರಾಜನಗರಕ್ಕೆ ಹೋಗುವ ಬಸ್‌ಗಳು ನಂಜನಗೂಡು ನಿಲ್ದಾಣಕ್ಕೆ ಬರದೇ ಹೋಗುತ್ತಿರುವ ಬಗ್ಗೆ ಸಾರ್ವಜನಿಕರು ಪ್ರತಿಭಟನೆ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ನಂಜನಗೂಡು–ಚಾಮರಾಜನಗರ ಮಧ್ಯೆ ಗ್ರಾಮೀಣ ಸಾರಿಗೆ ಬಸ್‌ಗಳನ್ನು ಓಡಿಸಲು ಕ್ರಮ ತೆಗೆದುಕೊಳ್ಳಲಾಗುವುದೆ;

(ಇ) ನಂಜನಗೂಡು ಬಸ್ ನಿಲ್ದಾಣವು ಕಿರಿದಾಗಿದ್ದು, ಭವಿಷ್ಯದ ಬೆಳವಣಿಗೆಯನ್ನು ಗಮನದಲ್ಲಿಟ್ಟುಕೊಂಡು ಪಟ್ಟಣದ ಹೊರವಲಯದಲ್ಲಿ ವಿಶಾಲವಾದ ನೂತನ ಸುಸಜ್ಜಿತ ಬಸ್ ನಿಲ್ದಾಣ ನಿರ್ಮಿಸುವ ಬಗ್ಗೆ ಪರಿಶೀಲಿಸಿ ಕ್ರಮ ತೆಗೆದುಕೊಳ್ಳಲಾಗುವುದೇ ?

## ಗಂಗಾಕಲ್ಯಾಣ ಯೋಜನೆಯಡಿ ಕೊಳವೆ ಬಾವಿಗಳು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೨೯೬ (೩೦೦೧) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಗಂಗಾಕಲ್ಯಾಣ ಯೋಜನೆಯಡಿ ಕೊಳವೆ ಬಾವಿಗಳನ್ನು ಕೊರೆಸಲು ನಿಗದಿಪಡಿಸಿದ ಅನುದಾನವೆಷ್ಟು;

(ಆ) ಎಷ್ಟು ಕೊಳವೆ ಬಾವಿಗಳನ್ನು ಕೊರೆಯಿಸಲಾಗಿದೆ;

(ಇ) ಅವುಗಳಲ್ಲಿ ಎಷ್ಟು ಕೊಳವೆ ಬಾವಿಗಳು ದುರಸ್ತಿಯಲ್ಲಿವೆ;

(ಈ) ಹಾಗಿದ್ದರೆ, ಅವುಗಳ ದುರಸ್ತಿಗೆ ಸರ್ಕಾರ ಕೈಗೊಂಡ ಕ್ರಮವೇನು ? (ಪೂರ್ಣ ವಿವರ ನೀಡುವುದು)

## ಭಾರತೀಯ ಮಾಹಿತಿ ತಂತ್ರಜ್ಞಾನ ಸಂಸ್ಥೆಯನ್ನು ಸ್ಥಾಪಿಸುವ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೨೯೭ (೨೯೨೬) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಮತ್ತು ಕೇಂದ್ರ ಸರ್ಕಾರ ಜಂಟಿಯಾಗಿ "ಭಾರತೀಯ ಮಾಹಿತಿ ತಂತ್ರಜ್ಞಾನ ಸಂಸ್ಥೆ" ಯನ್ನು ಹುಬ್ಬಳ್ಳಿ–ಧಾರವಾಡದಲ್ಲಿ ಸ್ಥಾಪಿಸುವ ಕುರಿತು ಎಂದು ನಿರ್ಣಯಿಸಲಾಯಿತು; ಇದರ ಧ್ಯೇಯೋದ್ದೇಶ ಕುರಿತು ಸಂಕ್ಷಿಪ್ತ ವಿವರಣೆ ನೀಡುವುದು;

(ಆ) ಸದರಿ ಸಂಸ್ಥೆ ಪ್ರಾರಂಭಿಸಲು ಹುಬ್ಬಳ್ಳಿ–ಧಾರವಾಡದಲ್ಲಿ ಸ್ಥಳ ನಿಗದಿಪಡಿಸಿದೆಯೇ; ಎಷ್ಟು ಎಕರೆ ಭೂಮಿ ಮತ್ತು ಎಲ್ಲಿ ಗುರುತಿಸಲಾಗಿದೆ;

(ಇ) ಭಾರತೀಯ ಮಾಹಿತಿ ತಂತ್ರಜ್ಞಾನ ಆರಂಭಿಸುವ ಕಾರ್ಯ ಸದ್ಯ ಯಾವ ಹಂತದಲ್ಲಿದೆ; ಇದಕ್ಕೆ ಯಾವುದಾದರೂ ಅಡೆತಡೆಗಳು ಇವೆಯೇ ?

# ಬರಪೀಡಿತ ಜಿಲ್ಲೆಗಳಲ್ಲಿ ಗಂಗಾಕಲ್ಯಾಣ ಯೋಜನೆ ಅನುಷ್ಠಾನಗೊಳಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೨೯೮ (೨೯೬೧) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬರಪೀಡಿತ ಪ್ರದೇಶಗಳಾದ ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಗಂಗಾಕಲ್ಯಾಣ ಯೋಜನೆ ಅನುಷ್ಠಾನವನ್ನು ನೀರಿನ ಕೊರತೆಯಿಂದಾಗಿ ಸ್ಥಗಿತಗೊಳಿಸಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ಈ ಭಾಗದ ಪರಿಶಿಷ್ಟ ಜಾತಿ/ಪರಿಶಿಷ್ಟ ಜನಾಂಗದ ಹಾಗೂ ಇತರೆ ಹಿಂದುಳಿದ ವರ್ಗಗಳ ರೈತರ ಜಮೀನುಗಳಿಗೆ ನೀರು ಒದಗಿಸಲು ಸರ್ಕಾರ ಯಾವುದಾದರೂ ಪರ್ಯಾಯ ಯೋಜನೆಯನ್ನು ರೂಪಿಸಲಿದೆಯೇ;

(ಇ) ಒಂದು ವೇಳೆ ಪರ್ಯಾಯ ಯೋಜನೆ ರೂಪಿಸದೇ ಇದ್ದರೆ, ಬೇರೆ ಯಾವ ಪರಿಹಾರೋಪಾಯಗಳನ್ನು ಸರ್ಕಾರ ರೂಪಿಸಲಿದೆ ?

# ರಾಜ್ಯ ರಸ್ತೆ ಸಾರಿಗೆ ಬಸ್ಸುಗಳಲ್ಲಿ ನಕಲಿ ಟಿಕೆಟ್

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೯೯ (೨೮೯೮) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ನಕಲಿ ಟಿಕೆಟ್ ನೀಡುತ್ತಿರುವುದು ಹಾಗೂ ಟಿಕೆಟ್ ನೀಡದೆ ಹಣ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಎಲೆಕ್ಟ್ರಾನಿಕ್ ಟಿಕೆಟ್ ಮೆಷಿನ್‌ಗಳನ್ನು ಯಾವ ಯಾವ ಹಂತಗಳಲ್ಲಿ, ಯಾವ ವಿಧದ ಬಸ್ಸುಗಳಲ್ಲಿ ಪ್ರಾರಂಭಿಸಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಇ) ಎಲೆಕ್ಟ್ರಾನಿಕ್ ಟಿಕೆಟ್ ಮೆಷಿನ್‌ಗಳನ್ನು ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಎಲ್ಲಾ ಹಂತದ ಎಲ್ಲಾ ರೀತಿಯ ಬಸ್ಸುಗಳಲ್ಲಿ ಅನುಷ್ಠಾನಗೊಳಿಸಲು ಸರ್ಕಾರಕ್ಕಿರುವ ತೊಡಕುಗಳೇನು; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ;

(ಈ) ನಕಲಿ ಟಿಕೆಟ್ ನೀಡುವುದು ಸೇರಿದಂತೆ, ರಸ್ತೆ ಸಾರಿಗೆ ಸಂಸ್ಥೆಯಲ್ಲಿನ ಆದಾಯ ಸೋರಿಕೆ ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳಾವುವು;

(ಉ) ಪ್ರಯಾಣಿಕರಿಗೆ ಉತ್ತಮ ಗುಣಮಟ್ಟದ ಸೇವೆ ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ನಕಲಿ ವೈದ್ಯರಿಗೆ ಕಡಿವಾಣ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೦೦ (೩೦೦೯) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯಲ್ಲಿ ಹೆಚ್ಚಾಗಿರುವ ನಕಲಿ ವೈದ್ಯರ ಹಾವಳಿ ತಪ್ಪಿಸಲು ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ;

(ಆ) ಹಳ್ಳಿಗಳಲ್ಲಿ ಪ್ರಸೂತಿ ಸಮಯದಲ್ಲಿ ನಕಲಿ ವೈದ್ಯರ ಹಾವಳಿ ಹೆಚ್ಚಾಗಿದ್ದು, ಇವರ ಕಡಿವಾಣಕ್ಕೆ ಸರ್ಕಾರ ಏನು ಕ್ರಮ ಕೈಗೊಂಡಿದೆ;

(ಇ) ಈ ನಕಲಿ ವೈದ್ಯರ ಕಡಿವಾಣಕ್ಕೆ ಸಂಬಂಧಪಟ್ಟಂತೆ ಜಿಲ್ಲಾಡಳಿತಕ್ಕೆ ಏನಾದರೂ ಅನುದಾನ ಬಿಡುಗಡೆಗೊಳಿಸಿದೆಯೇ; ಅದರಲ್ಲಿ ಎಷ್ಟು ಬಳಕೆಯಾಗಿದೆ; ಜಿಲ್ಲಾಡಳಿತದಿಂದ ಎಷ್ಟು ಸಭೆಗಳನ್ನು ನಡೆಸಲಾಗಿದೆ; ಈ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳೇನು ? (ಎರಡು ವರ್ಷದ ಮಾಹಿತಿ ಒದಗಿಸುವುದು)

ವಿ. ಶ್ರೀಶ್
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಪಿಠಿ, ಕಾ.ಸೂ. 1278, ಪ್ರತಿಗಳು 1500